## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಹರ್ಷ ಶುಗರ್ಸ್ ಲಿಮಿಟೆಡ್ ರವರಿಗೆ 30 ಮೆ.ವ್ಯಾ ಸಾಮರ್ಥ್ಯದ ಸಹ–ವಿದ್ಯುತ್ ಘಟಕ ಸ್ಥಾಪಿಸಲು ನಿರಾಕ್ಷೇಪಣೆಯನ್ನು ನೀಡುವ ಬಗ್ಗೆ.

ಓದಲಾಗಿದೆ: ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್ಇಡಿ/04/Harsha/ 2015-16 /2096 ದಿನಾಂಕ: 06.06.2015.

* * *

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಬೆಂಗಳೂರು ಸಂ. 1529 ದಿ. 22.6.15

ಪ್ರಸ್ತಾವನೆ: –

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು, ಮೆ: ಹರ್ಷ ಶುಗರ್ಸ್ ಲಿಮಿಟೆಡ್ ರವರಿಗೆ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಸವದತ್ತಿ ಗಾಮದಲ್ಲಿ 5000 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯನ್ನು ಸ್ಥಾಪಿಸಿ ಅದರ ಜೊತೆಗೆ 30 ಮೆ.ವ್ಯಾ. (gross) ಸಾಮರ್ಥ್ಯದ ಸಹ–ವಿದ್ಯುತ್ ಉತ್ಪಾದನೆ ಮಾಡಿ ತಮ್ಮ ಸಕ್ಕರೆ ಕಾರ್ಖಾನೆಯ ಉಪಯೋಗಕ್ಕೆ ಬಳಸಿಕೊಂಡು, ಉಳಿದ 23 ಮೆ.ವ್ಯಾ. ಸಾಮರ್ಥ್ಯದ ವಿದ್ಯುತ್‌ನ್ನು ಋತುವಿನ ಕಾಲದಲ್ಲಿ ಮತ್ತು 27 ಮೆ.ವ್ಯಾ. ಸಾಮರ್ಥ್ಯದ ವಿದ್ಯುತ್‌ನ್ನು ಋತುವಲ್ಲದ ಕಾಲದಲ್ಲಿ ವಿದ್ಯುತ್ ಜಾಲಕ್ಕೆ ಜೋಡಿಸಲು ಉದ್ದೇಶಿಸಿದ್ದು, ಸದರಿ ಸಹ–ವಿದ್ಯುತ್ ಘಟಕವನ್ನು ಸ್ಥಾಪಿಸಲು ಅನುಮತಿ ನೀಡುವಂತೆ, ತಾಂತ್ರಿಕ ವಿವರಗಳೊಂದಿಗೆ ಕಂಪನಿಯವರು ಸಲ್ಲಿಸಿರುವ ಪ್ರಸ್ತಾವನೆಗೆ ನಿರಾಕ್ಷೇಪಣಾ ಪತ್ರ ನೀಡಬಹುದೆಂಬ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:–

**ಸರ್ಕಾರದ ಆದೇಶ ಸಂಖ್ಯೆ: ಇಎನ್ 148 ಎನ್‌ಸಿಇ 2015,**
**ಬೆಂಗಳೂರು, ದಿನಾಂಕ: 16.06.2015.**

ಮೆ: ಹರ್ಷ ಶುಗರ್ಸ್ ಲಿಮಿಟೆಡ್ ರವರಿಗೆ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಸವದತ್ತಿ ಗಾಮದಲ್ಲಿ 5000 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯನ್ನು ಸ್ಥಾಪಿಸಿ ಅದರ ಜೊತೆಗೆ 30 ಮೆ.ವ್ಯಾ. (gross) ಸಾಮರ್ಥ್ಯದ ಸಹ–ವಿದ್ಯುತ್ ಘಟಕವನ್ನು ಸ್ಥಾಪಿಸಲು ಮತ್ತು ಈ ಘಟಕದಿಂದ ಉತ್ಪಾದನೆ ಆಗುವ ವಿದ್ಯುತ್‌ನ್ನು ತಮ್ಮ ಸಕ್ಕರೆ ಕಾರ್ಖಾನೆಯ ಉಪಯೋಗಕ್ಕೆ ಬಳಸಿಕೊಂಡು, ಉಳಿದ 23 ಮೆ.ವ್ಯಾ. ಸಾಮರ್ಥ್ಯದ ವಿದ್ಯುತ್ತನ್ನು ಋತುವಿನ ಕಾಲದಲ್ಲಿ ಮತ್ತು 27 ಮೆ.ವ್ಯಾ. ಸಾಮರ್ಥ್ಯದ ವಿದ್ಯುತ್ತನ್ನು ಋತುವಲ್ಲದ ಕಾಲದಲ್ಲಿ ವಿದ್ಯುತ್ ಜಾಲಕ್ಕೆ ಜೋಡಿಸಲು ಈ ಕೆಳಗಿನ ನಿಬಂಧನೆಗಳಿಗೊಳಪಟ್ಟು ಸರ್ಕಾರದ **'ನಿರಾಕ್ಷೇಪಣೆಯನ್ನು'** ನೀಡಲಾಗಿದೆ.

1. ಅಭಿವೃದ್ಧಿದಾರರು ಉತ್ಪಾದಿಸುವ ವಿದ್ಯುತ್‌ನ Evacuation ಗೆ ಸಂಬಂಧಿಸಿದಂತೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ಪ್ರತ್ಯೇಕ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು;
2. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ಸಂಸ್ಥೆಗಳ ಅಂದರೆ, ಅರಣ್ಯ/ಕಂದಾಯ ಇಲಾಖೆ ಹಾಗೂ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು;

--2)

3. ಅಭಿವೃದ್ಧಿದಾರರು ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸ್ವಂತ ಬಳಕೆಗೆ ಉಪಯೋಗಿಸಿಕೊಂಡು ಹೆಚ್ಚುವರಿ ವಿದ್ಯುತ್ ಮಾರಾಟ ಮಾಡುವ ಕುರಿತು ಸಂಬಂಧಿಸಿದ ಎಸ್ಕಾಂನೊಂದಿಗೆ ವಿದ್ಯುತ್ ಖರೀದಿ ಒಪ್ಪಂದ (ಪಿಪಿಎ) ಅಥವಾ ವೀಲಿಂಗ್ ಆಂಡ್ ಬ್ಯಾಂಕಿಂಗ್ ಮೂಲಕ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿದೆ;
4. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ನಿಯಮಾನುಸಾರ ಕೆ.ಆರ್.ಇ.ಡಿ.ಎಲ್.ಗೆ ಶುಲ್ಕ ಪಾವತಿಸತಕ್ಕದ್ದು;

ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎ.ಎ.ಚಪ್ಪರಬಂದ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎-22034674.

**ಇವರಿಗೆ:**
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
4 ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
6 ಉಪ ಅರಣ್ಯ ಸಂರಕ್ಷಣಾಧಿಕಾರಿ ಬೆಳಗಾವಿ ಜಿಲ್ಲೆ, ಬೆಳಗಾವಿ.
7 ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಭವನ, ಚರ್ಚ್‌ಸ್ಟ್ರೀಟ್ ರಸ್ತೆ, ಬೆಂಗಳೂರು-01.
8 ಮೆ: ಹರ್ಷ ಶುಗರ್ಸ್ ಲಿಮಿಟೆಡ್, ನಂ. ಫ್ಲಾಟ್ ನಂ.151, 2ನೇ ಹಂತ, ಹನುಮಾನ್ ದೇವಸ್ಥಾನದ ಎದುರು, ಹನುಮಾನ್ ನಗರ, ಬೆಳಗಾವಿ.
9 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.